ರಾಜ್ಯದಲ್ಲಿ ಖಾಲಿ ಇರುವ ಪಶುವೈದ್ಯಾಧಿಕಾರಿ ಹುದ್ದೆಗಳು.

2901:(3952)

ಶ್ರೀ ಪಿ.ಹೆಚ್.ಪೂಜಾರ್ (ಬಾಗಲಕೋಟೆ) ಮಾನ್ಯ ಪಶುಸಂಗೊಪನಾ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಖಾಲಿ ಇರುವ ಪಶುವೈದ್ಯಾಧಿಕಾರಿ ಹುದ್ದೆಗಳ ಸಂಖ್ಯೆ ಎಷ್ಟು?

ಆ) ಖಾಲಿ ಇರುವ ಹುದ್ದೆಗಳನ್ನು ಭರ್ತಿಮಾಡಲು ಸರ್ಕಾರದವರು ಕೈಗೊಂಡಿರುವ ಕ್ರಮಗಳೇನು?

ಶ್ರೀ ಬಿ.ಬಿ.ನಿಂಗಯ್ಯ (ಪಶುಸಂಗೊಪನಾ ರಾಜ್ಯ ಸಚಿವರು):

ಅ) 363.

ಆ) ಕರ್ನಾಟಕ ಲೋಕ ಸೇವಾ ಆಯೋಗದಿಂದ 195 ಅಭ್ಯರ್ಥಿಗಳ ಆಯ್ಕೆ ಪಟ್ಟಿ ಸ್ವೀಕೃತಗೊಂಡಿದ್ದು ಸದರಿ ಅಭ್ಯರ್ಥಿಗಳ ಪೋಲೀಸ್ ವರದಿಯನ್ನು ಹಾಗೂ ದೇಹಧಾರ್ಢ್ಯ ಧೃಢೀಕರಣ ಪತ್ರವನ್ನು ಪಡೆಯಲು ಸಂಬಂಧಿಸಿದ ಅಧಿಕಾರಿಗಳಿಗೆ ಕಳುಹಿಸಲಾಗಿದೆ. ಅವುಗಳು ಬಂದ ನಂತರ ನೇಮಕಾತಿ ಆದೇಶ ಹೊರಡಿಸಲಾಗುವುದು.

ಅರಣ್ಯ ಪ್ರದೇಶದಲ್ಲಿ ಹಿಂದುಳಿದ ರೈತರಿಗೆ ಭೂಮಂಜೂರಾತಿ.

2902:(3980)

ಶ್ರೀ ಕೆ.ಪ್ರವಾಪಚಂದ್ರ ಶೆಟ್ಟಿ (ಕುಂದಾಪುರ) ಮಾನ್ಯ ಅರಣ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) 1978ರ ಪೂರ್ವ ವಾಸ್ತವ್ಯವಿರುವ ರಕ್ಷಿತ ಅರಣ್ಯ ಪ್ರದೇಶದಲ್ಲಿ ಕೃಷಿ ಮಾಡಿ ವಾಸ್ತವ್ಯವಿರುವ ಆರ್ಥಿಕವಾಗಿ ಹಿಂದುಳಿದ ರೈತರಿಗೆ ಭೂ ಮಂಜೂರಾತಿ ಮಾಡಲಾಗುವುದೆ?

ಆ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಇಂತಹ ಎಷ್ಟು ಪ್ರಕರಣಗಳು ತನಿಖೆಗೆ ಬಾಕಿ ಇದೆ? (ಹೆಸರು ಮತ್ತು ಸಂಪೂರ್ಣ ವಿಳಾಸ, ಗ್ರಾಮ ಹಾಗೂ ತಾಲ್ಲೂಕು ತಿಳಿಸುವುದು)